**ಕರ್ನಾಟಕ ಸರ್ಕಾರ**

ಸಂಖ್ಯೆ:ಪ.ಪೂ.ಶಿಇ/ಶೈ.ಶಾ/ MHRD Sch /2015-III Ren/2018-19

ನಿರ್ದೇಶಕರ ಕಚೇರಿ,
ಪದವಿ ಪೂರ್ವ ಶಿಕ್ಷಣ ಇಲಾಖೆ,
18ನೇ ಅಡ್ಡರಸ್ತೆ , ಮಲ್ಲೇಶ್ವರಂ,
ಬೆಂಗಳೂರು - 560 012.
ದಿನಾಂಕ:30-06-2018

**ಪತ್ರಿಕಾ ಪ್ರಕಟಣೆ**

2015ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ "Direct Benefit Transfer (DBT) Programme" ನ ಅಡಿಯಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ಕಡ್ಡಾಯವಾಗಿ ಅವರ ತೃತೀಯ ನವೀಕರಣಕ್ಕೆ "online" ಮೂಲಕ ಅರ್ಜಿಯನ್ನು ಸಲ್ಲಿಸಬೇಕಾಗಿದೆ. ಈ ಸಂಬಂಧವಾಗಿ ಕೇಂದ್ರ ಸರ್ಕಾರದ ವತಿಯಿಂದ website:www.scholarships.gov.in ನ National e-Scholarship Portalನಲ್ಲಿ ಹೊಸ ತಂತ್ರಾಂಶವನ್ನು ಅಳವಡಿಸಲಾಗಿರುತ್ತದೆ. ಆದಕಾರಣ, 2015ನೇ ಸಾಲಿನಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ವಿದ್ಯಾರ್ಥಿಗಳು ತೃತೀಯ ನವೀಕರಣದ ನಿಮಿತ್ತ ಈ portal ನಲ್ಲಿಯೇ ಅರ್ಜಿಗಳನ್ನು "online" ಮೂಲಕ ಸಲ್ಲಿಸಬೇಕಿರುತ್ತದೆ. ವಿದ್ಯಾರ್ಥಿಗಳು ಈ ವೆಬ್‌ಸೈಟನ್ನು ಕೂಡಲೇ ಸಂಪರ್ಕಿಸಿ "online" ಮೂಲಕ ದಿನಾಂಕ:31-10-2018 ರೊಳಗಾಗಿ ಅರ್ಜಿಯನ್ನು ಸಲ್ಲಿಸುವುದು.

ಇಲಾಖಾ ವೆಬ್‌ಸೈಟ್‌ನಲ್ಲಿಯೂ ಕೂಡ 2015ನೇ ಸಾಲಿನಲ್ಲಿ ಆಯ್ಕೆಗೊಂಡಿರುವ ವಿದ್ಯಾರ್ಥಿಗಳಿಗೆ 'online" ಮೂಲಕ ತೃತೀಯ ನವೀಕರಣಕ್ಕೆ ಅರ್ಜಿ ಸಲ್ಲಿಸುವ ಕುರಿತು ಸುತ್ತೋಲೆಯನ್ನು ಅಳವಡಿಸಲಾಗಿದೆ. ವೆಬ್‌ಸೈಟ್ ಸಂಖ್ಯೆ:http://pue.kar.nic.in =>Scholarship=>MHRD Scholarship=> MHRD Scholarship 2015 -111RENEWAL. ವಿದ್ಯಾರ್ಥಿಗಳು ಈ ವೆಬ್‌ಸೈಟನ್ನು ಸಂಪರ್ಕಿಸಿ ತಮಗೆ ಸಂಬಂಧಪಟ್ಟ ಮಾಹಿತಿಯನ್ನು ಪಡೆದು ದಿನಾಂಕ: 31-10-2018ರೊಳಗಾಗಿ Online ಮೂಲಕ ಅರ್ಜಿಯನ್ನು ಸಲ್ಲಿಸುವುದು. ತೃತೀಯ ನವೀಕರಣ ಹಾಗೂ ಇನ್ನು ಮುಂದಿನ ನವೀಕರಣಗಳಿಗೆ ಆಧಾರ್ ಸಂಖ್ಯೆಯನ್ನು ಪಡೆದು ಬ್ಯಾಂಕ್ ಖಾತೆಯೊಂದಿಗೆ ಲಿಂಕ್ ಮಾಡಿರುವುದು. ಪ್ರಾಚಾರ್ಯರುಗಳು / ಸಂಸ್ಥೆಯವರು ಅರ್ಹ ವಿದ್ಯಾರ್ಥಿಗಳ ಅರ್ಜಿಗಳನ್ನು ಪರಿಶೀಲಿಸಿ ಅನುಮೋದಿಸುವ / ತಿರಸ್ಕರಿಸುವ ಕಾರ್ಯವನ್ನು ತಮ್ಮ ಹಂತದಲ್ಲಿಯೇ ನಿರ್ವಹಿಸುವುದು.

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ